## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ವಿವಿಧ ಸಂಘ / ಸಂಸ್ಥೆಗಳಿಗೆ ಹಂಚಿಕೆ ಮಾಡಿರುವ ನಾಗರೀಕ ಸೌಲಭ್ಯ ನಿವೇಶನಗಳ ಗುತ್ತಿಗೆ ಮೊತ್ತದ ಮೇಲಿನ ಬಡ್ಡಿಯ ಶೇ.50 ರಷ್ಟನ್ನು ಮನ್ನಾ ಮಾಡುವ ಬಗ್ಗೆ.

ಓದಲಾಗಿದೆ:
1. ಆಯುಕ್ತರು, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಇವರ ಪತ್ರ ಸಂಖ್ಯೆ: ಬೆಂಅಪ್ರಾ/ಇ.ಒ/ಸಿಎ/41/2020-21, ದಿನಾಂಕ: 15-06-2020.
2. ಸರ್ಕಾರದ ಆದೇಶ ಸಂಖ್ಯೆ: ನಅಇ 113 ಬೆಂಭೂಸ್ವಾ 2020, ದಿನಾಂಕ: 07-12-2020.
3. ಆಯುಕ್ತರು, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಇವರ ಪತ್ರ ಸಂಖ್ಯೆ: ಬೆಂಅಪ್ರಾ/ಇ.ಒ/ಸಿಎ/193/2020-21, ದಿನಾಂಕ: 03-02-2021.

* * * *

ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ಪತ್ರದಲ್ಲಿ, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ರಚಿಸಿದ ಬಡಾವಣೆಗಳಲ್ಲಿ ಅಥವಾ ಪ್ರಾಧಿಕಾರವು ಅನುಮೋದಿಸಿದ ಖಾಸಗಿ ಬಡಾವಣೆಗಳಲ್ಲಿನ ನಾಗರೀಕ ಸೌಲಭ್ಯ ನಿವೇಶನಗಳನ್ನು ವಿವಿಧ ಸಂಸ್ಥೆಗಳು, ಸಹಕಾರ ಸಂಘಗಳು ಶೈಕ್ಷಣಿಕ ದರ್ಮಾರ್ಥ ಅಥವಾ ಧಾರ್ಮಿಕ ಉದ್ದೇಶಗಳಿಗಾಗಿ ಸ್ಥಾಪಿತಗೊಂಡ ಟ್ರಸ್ಟ್‌ಗಳು, ಸರ್ಕಾರಿ ಸಂಸ್ಥೆಗಳಿಗೆ ಗುತ್ತಿಗೆ ಆಧಾರದ ಮೇಲ 30 ವರ್ಷಗಳ ಅವಧಿಗೆ ಗುತ್ತಿಗೆ ಆಧಾರದಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಕಾಯ್ದೆ 1976 ಮತ್ತು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ (ನಾಗರೀಕ ಸೌಲಭ್ಯ ನಿವೇಶನಗಳ ಹಂಚಿಕೆ) ನಿಯಮಗಳು 1989 ರಲ್ಲಿ ಕಲ್ಪಿಸಿರುವ ಅವಕಾಶದನ್ವಯ ಕಾಲಕಾಲಕ್ಕೆ ಪ್ರಾಧಿಕಾರವು ನಿಗದಿಪಡಿಸಿದ ಗುತ್ತಿಗೆ ಮೌಲ್ಯದ ದರವನ್ನು ವಿಧಿಸಿ ಹಂಚಿಕೆ ಮಾಡಲಾಗುತ್ತಿರುವುದಾಗಿ ಆಯುಕ್ತರು, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಇವರು ತಿಳಿಸಿರುತ್ತಾರೆ.

ಹಲವು ಪ್ರಕರಣಗಳಲ್ಲಿ ನಾಗರೀಕ ಸೌಲಭ್ಯ ನಿವೇಶನಗಳನ್ನು ಗುತ್ತಿಗೆ ಆಧಾರದಲ್ಲಿ ಹಂಚಿಕೆ ಪಡೆದ ಸಂಸ್ಥೆಗಳು ಸಕಾಲದಲ್ಲಿ ಗುತ್ತಿಗೆ ಮೌಲ್ಯವನ್ನು ಪಾವತಿಸುತ್ತಿಲ್ಲ. ನಾಗರೀಕ ಸೌಲಭ್ಯ ನಿವೇಶನಗಳನ್ನು ಗುತ್ತಿಗೆ ಆಧಾರದ ಮೇಲ ಪಡೆದ ಸಹಕಾರ ಸಂಘಗಳು, ಶೈಕ್ಷಣಿಕ, ಧರ್ಮಾರ್ಥ ಅಥವಾ ಧಾರ್ಮಿಕ ಉದ್ದೇಶಗಳಿಗಾಗಿ ಸ್ಥಾಪಿತಗೊಂಡ ಟ್ರಸ್ಟುಗಳು, ಹಲವಾರು ಕಾರಣಗಳಿಗಾಗಿ ಗುತ್ತಿಗೆ ಮೌಲ್ಯವನ್ನು ಪಾವತಿಸಲು ವಿಳಂಬವಾಗುತ್ತಿದ್ದು, ಈ ವಿಳಂಬಕ್ಕೆ ಪ್ರಾಧಿಕಾರವು ಶೆ.18% ರಷ್ಟು ಬಡ್ಡಿಯನ್ನು ವಿಧಿಸುತ್ತಿದ್ದು, ಸದರಿ ಬಡ್ಡಿಯ ಮೊತ್ತವನ್ನು ಮನ್ನಾ ಮಾಡುವಂತೆ ಮನವಿಗಳನ್ನು ಸಲ್ಲಿಸುತ್ತಿರುವುದಾಗಿ ತಿಳಿಸಿರುತ್ತಾರೆ.



Scanned with CamScanner

ಪ್ರಸ್ತುತ ಪ್ರಾಧಿಕಾರದ ಆರ್ಥಿಕ ಪರಿಸ್ಥಿತಿಯನ್ನು ಉತ್ತಮಗೊಳಿಸಲು ಈಗಾಗಲೇ ಗುತ್ತಿಗೆ ಆಧಾರದ ಮೇಲೆ ವಿವಿಧ ಬಡಾವಣೆಗಳಲ್ಲಿ, ಹಂಚಿಕೆ ಮಾಡಿರುವ ನಾಗರೀಕ ಸೌಲಭ್ಯ ನಿವೇಶನಗಳನ್ನು ಮಾರಾಟ ಮಾಡಲು ಪ್ರಸ್ತಾಪಿಸಲಾಗಿದ್ದು, ಪ್ರಾಧಿಕಾರದ ಆರ್ಥಿಕ ಪರಿಸ್ಥಿತಿ ಸದೃಢಗೊಳಿಸುವ ಹಿನ್ನಲೆಯಲ್ಲಿ, ಆರ್ಥಿಕ ಸಂಪನ್ಮೂಲವನ್ನು ಕ್ರೋಢೀಕರಿಸಲು ಒಂದು ಬಾರಿಯ ಕ್ರಮವಾಗಿ, ನಾಗರೀಕ ಸೌಲಭ್ಯ ನಿವೇಶನಗಳ ಗುತ್ತಿಗೆ ಮೊತ್ತವನ್ನು ಪಾವತಿಸಲು ವಿಳಂಬಿಸಿದ ಸಂದರ್ಭದಲ್ಲಿ ಸಂಸ್ಥೆಗಳಿಗೆ ವಿಧಿಸುತ್ತಿರುವ ಬಡ್ಡಿಯ ಮೊತ್ತವನ್ನು, ಪ್ರಾಧಿಕಾರವು ಸಾರ್ವಜನಿಕವಾಗಿ ಪತ್ರಿಕೆಯಲ್ಲಿ ಪ್ರಕಟಣೆಯನ್ನು ಹೊರಡಿಸಿದ 90 ದಿನಗಳೊಳಗಾಗಿ ಸದರಿ ಸಂಸ್ಥೆಗಳು ಪ್ರಾಧಿಕಾರಕ್ಕೆ ನಾಗರೀಕ ಸೌಲಭ್ಯ ನಿವೇಶನದ ಸಂಪೂರ್ಣ ಬಾಕಿ ಮೊತ್ತವನ್ನು ಪಾವತಿಸಲು ಮುಂದೆ ಬಂದಲ್ಲಿ, ನಿಯಮಾನುಸಾರ ವಿಧಿಸಲಾದ ಬಡ್ಡಿಯ ಒಟ್ಟು ಮೊತ್ತದ ಶೇ. 50 ರಷ್ಟು ಮೊತ್ತವನ್ನು ಪಾವತಿಸುವುದರಿಂದ ವಿನಾಯಿತಿ ನೀಡಲು ಅನುಮತಿಸುವಂತೆ ಕೋರಿರುತ್ತಾರೆ.

ಅದರಂತೆ ಮೇಲೆ ಓದಲಾದ ಕ್ರಮ ಸಂಖ್ಯೆ (2) ರ ಆದೇಶದಲ್ಲಿ, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ವಿವಿಧ ಸಂಘ / ಸಂಸ್ಥೆಗಳಿಗೆ ನಿಯಮಾನುಸಾರ ಹಂಚಿಕೆಯಾಗಿರುವ ನಾಗರೀಕ ಸೌಲಭ್ಯ ನಿವೇಶನಗಳ ಗುತ್ತಿಗೆ ನವೀಕರಣ ಮೊತ್ತವನ್ನು ಪಾವತಿಸಲು ವಿಳಂಬಿಸಿದ ಸಂದರ್ಭದಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ಸಾರ್ವಜನಿಕವಾಗಿ ಪತ್ರಿಕೆಗಳಲ್ಲಿ ಪ್ರಕಟಣೆಯನ್ನು ಹೊರಡಿಸಿದ 90 ದಿನಗಳೊಳಗಾಗಿ ಸಂಘ / ಸಂಸ್ಥೆಗಳು ಪ್ರಾಧಿಕಾರಕ್ಕೆ ಪಾವತಿಸಲು ಮುಂದೆ ಬಂದಲ್ಲಿ, ಒಂದು ಬಾರಿಯ ಕ್ರಮವಾಗಿ ನಿಯಮಾನುಸಾರ ವಿಧಿಸಲಾದ ಬಡ್ಡಿಯ ಮೊತ್ತದ ಶೇ.50% ರಷ್ಟನ್ನು ಮನ್ನಾ ಮಾಡಲು ಅನುಮತಿಸಿ ಆದೇಶಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (3) ರ ಪತ್ರದಲ್ಲಿ, ದಿನಾಂಕ:07-12-2020ರ ಆದೇಶದನ್ವಯ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ವಿವಿಧ ಸಂಘ / ಸಂಸ್ಥೆಗಳಿಗೆ ನಿಯಮಾನುಸಾರ ಹಂಚಿಕೆಯಾಗಿರುವ ನಾಗರೀಕ ಸೌಲಭ್ಯ ನಿವೇಶನಗಳ ಗುತ್ತಿಗೆ ನವೀಕರಣಕ್ಕೆ ಸಂಬಂಧಿಸಿದ ಪ್ರಕರಣಗಳಲ್ಲಿ ಮಾತ್ರ ಶೇ.50 ರಷ್ಟು ಬಡ್ಡಿಯನ್ನು ಮನ್ನಾ ಮಾಡಲು ಅನ್ವಯವಾಗುತ್ತಿದ್ದು, ನಾಗರೀಕ ಸೌಲಭ್ಯ ನಿವೇಶನದ ಸಂಪೂರ್ಣ ಬಾಕಿ ಮೊತ್ತವನ್ನು ಪಾವತಿಸಲು ಮುಂದೆ ಬರುವ ಎಲ್ಲಾ ಪ್ರಕರಣಗಳಲ್ಲಿ ಅನ್ವಯಿಸಲು ಸಾಧ್ಯವಾಗುವುದಿಲ್ಲವಾದ್ದರಿಂದ, ಈ ಬಗ್ಗೆ ಸೂಕ್ತ ಆದೇಶ ಹೊರಡಿಸುವಂತೆ ಆಯುಕ್ತರು, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ರವರು ಕೋರಿರುತ್ತಾರೆ.

ಸರ್ಕಾರವು ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ನಅಇ 113 ಬೆಂಭೂಸ್ವಾ 2020**
**ಬೆಂಗಳೂರು, ದಿನಾಂಕ: 09-12-2021**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನಲೆಯಲ್ಲಿ, ಸರ್ಕಾರದ ಆದೇಶ ಸಂಖ್ಯೆ: ನಅಇ 113 ಬೆಂಭೂಸ್ವಾ 2020, ದಿನಾಂಕ: 07-12-2020ರ ಆದೇಶವನ್ನು ಪರಿಷ್ಕರಿಸಿ, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ (ನಾಗರೀಕ ಸೌಲಭ್ಯ ನಿವೇಶನಗಳ ಹಂಚಿಕೆ) ನಿಯಮಗಳು, 1989ರಲ್ಲಿ ನಿಗಧಿಪಡಿಸುವಂತೆ, ನಾಗರೀಕ ಸೌಕರ್ಯ ನಿವೇಶನಗಳ ಗುತ್ತಿಗೆಗಳನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ನವೀಕರಿಸದಿರುವಲ್ಲೆಲ್ಲಾ, ನಾಗರೀಕ ಸೌಲಭ್ಯ ನಿವೇಶನಗಳ



Scanned with CamScanner

ಹಂಚಿಕೆದಾರರು ಬಡ್ಡಿಯೊಂದಿಗೆ ಗುತ್ತಿಗೆ ಮೊತ್ತವನ್ನು ಪಾವತಿಸದಿರುವ ಸಂದರ್ಭದಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಸಂಪನ್ಮೂಲ ಕ್ರೋಢೀಕರಣಕ್ಕೆ ಅನುಕೂಲವಾಗುವ ಉದ್ದೇಶದಿಂದ ಒಂದು ಬಾರಿಯ ಕ್ರಮವಾಗಿ, ಅಂತಹ ಹಂಚಿಕೆದಾರರು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರಕ್ಕೆ ದಿನಪತ್ರಿಕೆಗಳಲ್ಲಿ ಬಡ್ಡಿ ಮನ್ನಾ ಮಾಡುವ ಕೊಡುಗೆಯನ್ನು ಪ್ರಕಟಿಸಿದ ದಿನಾಂಕದಿಂದ 180 ದಿನಗಳೊಳಗೆ ಗುತ್ತಿಗೆ ಮೊತ್ತದ ಜೊತೆಗೆ ಬಾಕಿಯಿರುವ ಬಡ್ಡಿಯ ಶೇಕಡ 50ರಷ್ಟನ್ನು ಪಾವತಿಸಿದರೆ, ಇನ್ನುಳಿದ ಶೇಕಡ 50ರಷ್ಟು ಬಡ್ಡಿಯನ್ನು ಮನ್ನಾ ಮಾಡಲು ಸರ್ಕಾರದ ಅನುಮತಿ ನೀಡಿ ಆದೇಶಿಸಿದೆ.

ನಿಗದಿತ ಸಮಯದೊಳಗೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರಕ್ಕೆ ಗುತ್ತಿಗೆ ಮೊತ್ತವನ್ನು ಪಾವತಿಸಲು ವಿಫಲರಾಗಿರುವ ನಾಗರೀಕ ಸೌಲಭ್ಯ ನಿವೇಶನಗಳ ಎಲ್ಲಾ ಹಂಚಿಕೆದಾರರಿಗೂ ಸಹ ಶೇಕಡಾ 50ರಷ್ಟು ಬಡ್ಡಿ ಮನ್ನಾದ ಕೊಡುಗೆಯು ಅನ್ವಯಿಸುತ್ತದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎಸ್. ವೀಣಾ)
ಸರ್ಕಾರದ ಅಧೀನ ಕಾರ್ಯದರ್ಶಿ
ನಗರಾಭಿವೃದ್ಧಿ ಇಲಾಖೆ.

ಇವರಿಗೆ:

1. ಸರ್ಕಾರದ ಮುಖ್ಯ ಕಾರ್ಯದರ್ಶಿಯವರು, ವಿಧಾನಸೌಧ, ಬೆಂಗಳೂರು.
2. ಆಯುಕ್ತರು, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು.
3. ಸರ್ಕಾರದ ಜಂಟಿ ಕಾರ್ಯದರ್ಶಿ (ಸಚಿವ ಸಂಪುಟ), ವಿಧಾನಸೌಧ, ಬೆಂಗಳೂರು (ಪ್ರಕರಣ ಸಂಖ್ಯೆ: ಸಿ:418/2021)
4. ಕಾರ್ಯದರ್ಶಿ, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು.
5. ನಗರ ಯೋಜನಾ ಸದಸ್ಯರು, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು.
6. ಆರ್ಥಿಕ ಸದಸ್ಯರು, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು.

ಪ್ರತಿ:

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ, ವಿಕಾಸಸೌಧ, ಬೆಂಗಳೂರು.
2. ಸರ್ಕಾರದ ಉಪ ಕಾರ್ಯದರ್ಶಿ-1, ನಗರಾಭಿವೃದ್ಧಿ ಇಲಾಖೆ, ವಿಕಾಸಸೌಧ, ಬೆಂಗಳೂರು.



Scanned with CamScanner

Deccan Herald & Vijay Karnataka Dt:- 14/01/22

ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಅರಣ್ಯ ಪಡೆ ಮುಖ್ಯಸ್ಥರು) ಇವರ ಕಛೇರಿ
ಅರಣ್ಯ ಭವನ, ಮಲ್ಲೇಶ್ವರಂ, ಬೆಂಗಳೂರು–560003. ದೂ: 080–23346551.

No.KFD/HOFF/B10/PUR/8/2021-ICT-KFD Date: 14.01.2022

## ಅಲ್ಪಾವಧಿ ಇ–ಟೆಂಡರ್ ಅಧಿಸೂಚನೆ

**ಆಲ್ ಇನ್ ಒನ್ ಡೆಸ್ಕ್ ಟಾಪ್ ಕಂಪ್ಯೂಟರ್, ಲ್ಯಾಪ್ ಟಾಪ್, ಲೇಸರ್ ಜೆಟ್, ಮಲ್ಟಿಫಂಕ್ಷನ್ ಪ್ರಿಂಟರ್ ಗಳನ್ನು ಅಗತ್ಯ ಹಾರ್ಡ್‌ವೇರ್, ಸಾಫ್ಟ್ ವೇರ್, ಆಪರೇಟಿಂಗ್ ಸಿಸ್ಟಮ್, ಪರಿಕರಗಳು ಮತ್ತು ಸಮಗ್ರ ಆನ್ ಸೈಟ್ ವಾರೆಂಟಿಯೊಂದಿಗೆ, ಮತ್ತು ಮೈಕ್ರೋಸಾಫ್ಟ್ ಆಫೀಸ್ 2019 ಸ್ಟ್ಯಾಂಡರ್ಡ್ perpetual ಲೈಸೆಂಸ್‌ಗಳನ್ನು ಒದಗಿಸಲು ಹಾಗೂ ಸರಬರಾಜು ಮಾಡಲು ಅಲ್ಪಾವಧಿ ಇ–ಟೆಂಡರ್ ಅಧಿಸೂಚನೆ.**

ಕರ್ನಾಟಕ ಅರಣ್ಯ ಇಲಾಖೆಯ ವಿವಿಧ ಕಛೇರಿಗಳಿಗೆ ಅಗತ್ಯವಿರುವ ಆಲ್ ಇನ್ ಒನ್ ಡೆಸ್ಕ್ ಟಾಪ್ ಕಂಪ್ಯೂಟರ್, ಲ್ಯಾಪ್ ಟಾಪ್, ಲೇಸರ್ ಜೆಟ್ ಮಲ್ಟಿಫಂಕ್ಷನ್ ಪ್ರಿಂಟರ್ ಗಳನ್ನು ಅಗತ್ಯ ಹಾರ್ಡ್‌ವೇರ್, ಸಾಫ್ಟ್ ವೇರ್, ಆಪರೇಟಿಂಗ್ ಸಿಸ್ಟಮ್, ಪರಿಕರಗಳು ಮತ್ತು ಸಮಗ್ರ ಆನ್ ಸೈಟ್ ವಾರೆಂಟಿಯೊಂದಿಗೆ, ಮತ್ತು ಮೈಕ್ರೋಸಾಫ್ಟ್ ಆಫೀಸ್ 2019 ಸ್ಟ್ಯಾಂಡರ್ಡ್ perpetual ಲೈಸೆಂಸ್‌ಗಳನ್ನು ಒದಗಿಸಲು ಹಾಗೂ ಸರಬರಾಜು ಮಾಡಲು ಅಲ್ಪಾವಧಿ ಇ–ಟೆಂಡರ್, ಅಧಿಸೂಚನೆ ಸಂಖ್ಯೆ: FD/2021-22/IND1864 ಯನ್ನು ದಿನಾಂಕ: 14.01.2022 ರಂದು ಇ–ಪ್ರೊಕ್ಯೂರ್‌ಮೆಂಟ್ ಪೋರ್ಟಲ್‌ನಲ್ಲಿ ಪ್ರಕಟಿಸಲಾಗಿದ್ದು, ಆಸಕ್ತರಿಂದ ಬಿಡ್ಡುಗಳನ್ನು ಆಹ್ವಾನಿಸಲಾಗಿದೆ. ಇ–ಪ್ರೊಕ್ಯೂರ್‌ಮೆಂಟ್ ಪೋರ್ಟಲ್ ವೆಬ್‌ಸೈಟ್ ಮುಖಾಂತರ ದಿನಾಂಕ: 14.01.2022 ರಿಂದ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ, ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ 29.01.2022ರ ಸಂಜೆ 5.30 ಗಂಟೆಯವರೆಗೆ ಅವಕಾಶವಿರುತ್ತದೆ. ತಾಂತ್ರಿಕ ಬಿಡ್ಡನ್ನು 31.01.2022ರ ಬೆಳಗ್ಗೆ 11.00 ಗಂಟೆಗೆ ಈ ಕಛೇರಿಯಲ್ಲಿ ತೆರೆಯಲಾಗುವುದು, ಆರ್ಥಿಕ ಬಿಡ್ಡನ್ನು ತಾಂತ್ರಿಕ ಬಿಡ್ಡಿನ ಮೌಲ್ಯಮಾಪನದ ನಂತರ ತೆರೆಯಲಾಗುವುದು. ಟೆಂಡರ್ ಅಧಿಸೂಚನೆಯ ಪೂರ್ಣ ಮಾಹಿತಿಯನ್ನು ಇ–ಪ್ರೊಕ್ಯೂರ್‌ಮೆಂಟ್ ವೆಬ್‌ಸೈಟ್ https://eproc.karnataka.gov.in ನಲ್ಲಿ ಪಡೆಯಬಹುದಾಗಿದೆ.

ಸಹಿ/–
ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ
(ಮಾಹಿತಿ ಸಂವಹನ ತಂತ್ರಜ್ಞಾನ)

DIPR/DDU/Zen/R.O:2876/2021-22

**ಕೋವಿಡ್-19. ಆತಂಕ ಬೇಡ; ಮುನ್ನೆಚ್ಚರಿಕೆ ಇರಲಿ.**




## ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ

ಟಿ. ಚೌಡಯ್ಯ ರಸ್ತೆ, ಕುಮಾರ ಪಾರ್ಕ್ ಪಶ್ಚಿಮ, ಬೆಂಗಳೂರು–560020.

ಸಂ: ಬೆಂಅಪ್ರಾ/ಎ.ಅ/ಸಿ.ಎ/253/2021–22 ದಿನಾಂಕ: 13.01.2022

### ಪ್ರಕಟಣೆ

ವಿಷಯ: ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ವಿವಿಧ ಸಂಘ/ಸಂಸ್ಥೆಗಳಿಗೆ ಹಂಚಿಕೆ ಮಾಡಿರುವ ನಾಗರಿಕ ಸೌಲಭ್ಯ ನಿವೇಶನಗಳ ಗುತ್ತಿಗೆ ಮೊತ್ತದ ಮೇಲಿನ ಬಡ್ಡಿಯ ಶೇ 50 ರಷ್ಟನ್ನು ಮನ್ನಾ ಮಾಡುವ ಬಗ್ಗೆ

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ವಿವಿಧ ಸಂಘ/ ಸಂಸ್ಥೆಗಳಿಗೆ ಹಂಚಿಕೆ ಮಾಡಿರುವ ನಾಗರಿಕ ಸೌಲಭ್ಯ ನಿವೇಶನಗಳ ಗುತ್ತಿಗೆ ಮೊತ್ತದ ಮೇಲಿನ ಬಡ್ಡಿಯ ಶೇ 50 ರಷ್ಟನ್ನು ಮನ್ನಾ ಮಾಡಲು ಸರ್ಕಾರವು ಆದೇಶ ಸಂಖ್ಯೆ ನಅಇ 113 ಬೆಂಭೂಸ್ವಾ 2020 ದಿನಾಂಕ: 09.12.2021ರಲ್ಲಿ ಅನುಮತಿಸಿರುತ್ತದೆ. ಸರ್ಕಾರಿ ಆದೇಶದ ಉದ್ಧೃತ ಭಾಗವು ಈ ಕೆಳಕಂಡಂತಿರುತ್ತದೆ.

1. ನಾಗರಿಕ ಸೌಕರ್ಯ ನಿವೇಶನಗಳ ಗುತ್ತಿಗೆಗಳನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ನವೀಕರಿಸದಿರುವಲ್ಲೆಲ್ಲಾ ನಾಗರಿಕ ಸೌಲಭ್ಯ ನಿವೇಶನಗಳ ಹಂಚಿಕೆದಾರರು ಬಡ್ಡಿಯೊಂದಿಗೆ ಗುತ್ತಿಗೆ ಮೊತ್ತವನ್ನು ಪಾವತಿಸದಿರುವ ಸಂದರ್ಭದಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಸಂಪನ್ಮೂಲ ಕ್ರೋಢೀಕರಣಕ್ಕೆ ಅನುಕೂಲವಾಗುವ ಉದ್ದೇಶದಿಂದ ಒಂದು ಬಾರಿಯ ಕ್ರಮವಾಗಿ, ಅಂತಹ ಹಂಚಿಕೆದಾರರು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರಕ್ಕೆ ದಿನಪತ್ರಿಕೆಗಳಲ್ಲಿ ಬಡ್ಡಿ ಮನ್ನಾ ಮಾಡುವ ಕೊಡುಗೆಯನ್ನು ಪ್ರಕಟಿಸಿದ ದಿನಾಂಕದಿಂದ 180 ದಿನಗಳೊಳಗೆ ಗುತ್ತಿಗೆ ಮೊತ್ತದ ಜೊತೆಗೆ ಬಾಕಿಯಿರುವ ಬಡ್ಡಿಯ ಶೇಕಡ 50 ರಷ್ಟನ್ನು ಪಾವತಿಸಿದರೆ, ಇನ್ನುಳಿದ ಶೇಕಡ 50 ರಷ್ಟು ಬಡ್ಡಿಯನ್ನು ಮನ್ನಾ ಮಾಡಲು ಸರ್ಕಾರದ ಅನುಮತಿ ನೀಡಿ ಆದೇಶಿಸಿದೆ;

2. ನಿಗದಿತ ಸಮಯದೊಳಗೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರಕ್ಕೆ ಗುತ್ತಿಗೆ ಮೊತ್ತವನ್ನು ಪಾವತಿಸಲು ವಿಫಲರಾಗಿರುವ ನಾಗರಿಕ ಸೌಲಭ್ಯ ನಿವೇಶನಗಳ ಎಲ್ಲಾ ಹಂಚಿಕೆದಾರರಿಗೂ ಸಹ ಶೇಕಡಾ 50 ರಷ್ಟು ಬಡ್ಡಿ ಮನ್ನಾದ ಕೊಡುಗೆಯು ಅನ್ವಯಿಸುತ್ತದೆ;

ಈ ಹಿನ್ನೆಲೆಯಲ್ಲಿ ಶೇ 50 ರಷ್ಟು ಬಡ್ಡಿ ಮನ್ನಾ ಬಗ್ಗೆ ಪತ್ರಿಕೆಯಲ್ಲಿ ಪ್ರಕಟಗೊಂಡ ದಿನಾಂಕದಿಂದ 180 ದಿನಗಳ ಒಳಗಾಗಿ ನಾಗರಿಕ ಸೌಲಭ್ಯ ನಿವೇಶನದ ಗುತ್ತಿಗೆ ಮೊತ್ತದ ಜೊತೆಗೆ ಬಾಕಿಯಿರುವ ಬಡ್ಡಿಯ ಶೇಕಡ 50 ರಷ್ಟನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರಕ್ಕೆ ಪಾವತಿಸಿದರೆ, ಇನ್ನುಳಿದ ಶೇಕಡ 50 ರಷ್ಟು ಬಡ್ಡಿಯನ್ನು ಮನ್ನಾ ಮಾಡಲಾಗುವುದು ಎಂದು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ಸಿಎ ನಿವೇಶನಗಳನ್ನು ಹಂಚಿಕೆ ಪಡೆದು ಗುತ್ತಿಗೆ ಮೊತ್ತ ಬಾಕಿ ಉಳಿಸಿಕೊಂಡಿರುವ ಸಂಘ/ಸಂಸ್ಥೆ/ಟ್ರಸ್ಟ್‌ಗಳಿಗೆ ಈ ಮೂಲಕ ತಿಳಿಯಪಡಿಸಿದೆ.

ಸಹಿ/- ಆಯುಕ್ತರು, ಬೆಂ.ಅ.ಪ್ರಾ, ಬೆಂಗಳೂರು.